ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಟಿ.ಎ.ಶ್ರೀನಿವಾಸ್ ಇವರು ನಿಯಮ 72 ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.

**ವಿಷಯ:**

ಜಯಪ್ರಕಾಶ್ ಹೆಗ್ಡೆ ನೇತೃತ್ವದ ಹಿಂದುಳಿದ ವರ್ಗಗಳ ಆಯೋಗವು ಸಲ್ಲಿಸಿರುವ ವಿಶೇಷ ವರದಿಯ ಪ್ರಕಾರ, ಚಪ್ಪರಬಂದ, ಗೌಳಿ, ಕಾಡುಗೊಲ್ಲ, ಕುಡುಬಿ, ಕಂಜರಭಾಟ ಸಮುದಾಯಗಳನ್ನು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಅಲೆಮಾರಿ, ಅರೆ-ಅಲೆಮಾರಿ ಜಾತಿ ಪಟ್ಟಿಗೆ ಸೇರ್ಪಡೆ ಮಾಡುವಂತೆ ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ. ಒಂದು ಮಾಹಿತಿಯ ಪ್ರಕಾರ, ಸರ್ಕಾರದ ಆದೇಶ ಸಂಖ್ಯೆ: ಪಿಎಚ್‌ಎಸ್ 262 ಎಸ್‌ಇಡಬ್ಲ್ಯೂ 65 ದಿನಾಂಕ 01-02-1966ರ ಅಲೆಮಾರಿ, ಅರೆ ಅಲೆಮಾರಿ ಜನಾಂಗಗಳಿಗೆ ಒಳಪಡುವ ಜಾತಿ ಪಟ್ಟಿಯ ಮೇಲೆ ಇಲ್ಲಿಯವರೆಗೆ ಸರ್ವೋಚ್ಚ ನ್ಯಾಯಾಲಯ ಅಥವಾ ಉಚ್ಚ ನ್ಯಾಯಾಲಯದಲ್ಲಿ ಯಾವುದೇ ರಿಟ್ ಪಿಟಿಷನ್ ಪ್ರಕರಣಗಳು ದಾಖಲಾಗಿರುವುದಿಲ್ಲ.

ಮುಂದುವರೆದು, ಸರ್ಕಾರದ ಆದೇಶ ಸಂಖ್ಯೆ ಸಕಇ 255 ಬಿಸಿಎ 2000, ದಿನಾಂಕ 30.03.2002ರ ಪ್ರಕಾರ ಈ ಮೇಲಿನ 5 ಸಮುದಾಯಗಳು ಪ್ರವರ್ಗ-1ರ ಪಟ್ಟಿಯಲ್ಲಿಯೇ ಮುಂದುವರೆಯುತ್ತಾರೆ. ಅಲ್ಲದೆ ಈ ಅಲೆಮಾರಿ ಸಮುದಾಯಗಳು ಶಿಕ್ಷಣ ಮತ್ತು ಉದ್ಯೋಗದಲ್ಲಿ ಶೇಕಡ ಮೀಸಲಾತಿಯನ್ನು ಅಪೇಕ್ಷಿಸುತ್ತಿಲ್ಲ. ಬದಲಾಗಿ ಕೇವಲ ಸಾಲ-ಸೌಲಭ್ಯಕ್ಕಾಗಿ 01-02-1966 ರ 46 ಅಲೆಮಾರಿ, ಅರೆ ಅಲೆಮಾರಿ ಜಾತಿ ಪಟ್ಟಿಯನ್ನು ಪರಿಷ್ಕರಿಸಿ, ಆ ಪಟ್ಟಿಯಲ್ಲಿ ಈ 5 ಸಮುದಾಯಗಳನ್ನು ಸೇರ್ಪಡೆ ಮಾಡುವಂತೆ ಬಹು ವರ್ಷಗಳ ಬೇಡಿಕೆ ಇದ್ದು, ಸರ್ಕಾರ ಮುಂದೆ ನಡೆಯುವ ಸಚಿವ ಸಂಪುಟ ಸಭೆಯಲ್ಲಿ ಈ ಮೇಲಿನ 5 ಸಮುದಾಯಗಳನ್ನು ಅಲೆಮಾರಿ, ಅರೆ-ಅಲೆಮಾರಿ ಜನಾಂಗಗಳು ಎಂದು ಘೋಷಿಸಿ, ಸಾಮಾಜಿಕ ನ್ಯಾಯ ಒದಗಿಸಲು ಪ್ರಯತ್ನಿಸುತ್ತಿದೆಯೇ? ಇದರ ಕುರಿತು ಮಾಹಿತಿ ಒದಗಿಸಿರಿ.

**ಉತ್ತರ:**

ಭಾರತದ ಮಾನ್ಯ ಸರ್ವೋಚ್ಚ ನ್ಯಾಯಾಲಯದ ದಿನಾಂಕ:16.11.1992 ರ ಆದೇಶದಲ್ಲಿ ರಾಜ್ಯದಲ್ಲಿ ಹಿಂದುಳಿದಿರುವಿಕೆಯನ್ನು ಗುರುತಿಸಲು ಪ್ರತಿಯೊಂದು ರಾಜ್ಯದಲ್ಲೂ ಶಾಶ್ವತವಾಗಿ ಹಿಂದುಳಿದ ವರ್ಗಗಳ ಆಯೋಗ ರಚನೆಯಾಗಬೇಕು ಎಂಬುದಾಗಿ ಆದೇಶಿಸಿದೆ. ಅದಕ್ಕನುಗುಣವಾಗಿ ರಾಜ್ಯದಲ್ಲಿ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ಆಯೋಗದ ಅಧಿನಿಯಮ, 1995 ರಂತೆ, ಸರ್ಕಾರದ ಅಧಿಸೂಚನೆ ಸಂಖ್ಯೆ: ಎಸ್.ಡಬ್ಲ್ಯೂ.ಡಿ 164 ಬಿಸಿಎ 97, ದಿನಾಂಕ:29.11.1997 ರನ್ವಯ ರಾಜ್ಯದಲ್ಲಿ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ ದಿನಾಂಕ:01.12.1997 ರಂದು ಜಾರಿಗೆ ಬಂದಿರುತ್ತದೆ. ಸದರಿ ಅಧಿನಿಯಮದ ಕಲಂ (9) ರ ಅಡಿಯಲ್ಲಿ ಆಯೋಗದ ಪ್ರಕಾರ್ಯಗಳ ಬಗ್ಗೆ ನಮೂದಿಸಿದ್ದು, ಅದರಂತೆ ಆಯೋಗವು ಕಾರ್ಯನಿರ್ವಹಿಸುತ್ತಿದೆ.

ಸರ್ಕಾರದಿಂದ ರಚಿತಗೊಂಡ ಈ ಹಿಂದಿನ ಹಿಂದುಳಿದ ವರ್ಗಗಳ ಆಯೋಗಗಳು ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಅಧಿನಿಯಮ, 1995ರ ಕಲಂ 9(1) ರಡಿಯಲ್ಲಿ ಹಿಂದುಳಿದ ವರ್ಗಗಳನ್ನು ಗುರುತಿಸಲು ಸಾಮಾಜಿಕ, ಶೈಕ್ಷಣಿಕ, ಔದ್ಯೋಗಿಕ ಹಾಗೂ ಆರ್ಥಿಕ ಅಂಶಗಳ ಮೇಲೆ ವಿವಿಧ ಮಾನದಂಡಗಳನ್ನು ರೂಪಿಸಿ ಹಿಂದುಳಿದ ವರ್ಗಗಳ ಪಟ್ಟಿಯ ವಿವಿಧ ಪ್ರವರ್ಗಗಳಿಗೆ ಸೇರಿಸುವಂತೆ ಸಲಹೆ/ಶಿಫಾರಸ್ಸನ್ನು ಕಾಲಕಾಲಕ್ಕೆ ಸರ್ಕಾರಕ್ಕೆ ಸಲ್ಲಿಸಲಾಗುತ್ತದೆ. ಅದರಂತೆ, ಹಿಂದುಳಿದ ವರ್ಗಗಳಿಗೆ ಶಿಕ್ಷಣ ಮತ್ತು ಉದ್ಯೋಗದಲ್ಲಿ ಮೀಸಲಾತಿ ಸೌಲಭ್ಯ ಹಾಗೂ ಸರ್ಕಾರದಿಂದ ದೊರೆಯುವ ಸೌಲಭ್ಯಗಳು ಕಾಲಕಾಲಕ್ಕೆ ಯಾವುದೇ ಅಡೆತಡೆಯಿಲ್ಲದೇ ದೊರಕಿಸಿ ಸಾಮಾಜಿಕ ನ್ಯಾಯವನ್ನು ಕಲ್ಪಿಸುವಲ್ಲಿ ಕ್ರಮ ಕೈಗೊಂಡಿರುತ್ತದೆ.

ಮುಂದುವರೆದು, ಶ್ರೀ ಕೆ. ಜಯಪ್ರಕಾಶ ಹೆಗ್ಡೆ ರವರ ನೇತೃತ್ವದ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಪ್ರಥಮ ವರದಿ-2022 ರಲ್ಲಿ ಕಾಡುಗೊಲ್ಲ, ಹಟ್ಟಿಗೊಲ್ಲ, ಖಂಜಿರ್‌ಭಾಟ್, ಕಂಜರ್, ಖಂಜಾರ್‌ಭಾಟ್, ಚಪ್ಪರಬಂದ ಮತ್ತು ಕುಡುಬಿ ಸಮುದಾಯಗಳನ್ನು ಹಾಗೂ ದ್ವಿತೀಯ ವರದಿ-2023 ರಲ್ಲಿ ಗೌಳಿ ಸಮುದಾಯವನ್ನು ಅಲೆಮಾರಿ/ ಅರೆ ಅಲೆಮಾರಿ ಪಟ್ಟಿಗೆ ಸೇರಿಸುವಂತೆ ವರದಿ ಸಲ್ಲಿಸಿದ್ದು, ಪರಿಶೀಲನೆಯಲ್ಲಿರುತ್ತದೆ.

ರಾಜ್ಯದ ಹಿಂದುಳಿದ ವರ್ಗಗಳಿಗೆ ಶಿಕ್ಷಣ ಮತ್ತು ಉದ್ಯೋಗದಲ್ಲಿ ಕಲ್ಪಿಸಿರುವ ಮೀಸಲಾತಿಯನ್ನು ಮರು ವರ್ಗೀಕರಿಸಿರುವ ಸರ್ಕಾರದ ಆದೇಶ ಸಂಖ್ಯೆ: ಹಿಂವಕ 135 ಬಿಸಿಎ 2023, ದಿನಾಂಕ:27.03.2023 ರ ಆದೇಶವನ್ನು ಪ್ರಶ್ನಿಸಿ ಘನ ಸರ್ವೋಚ್ಚ ನ್ಯಾಯಾಲಯದಲ್ಲಿ ರಿಟ್ ಪಿಟಿಷನ್ ಸಂಖ್ಯೆ: 435/2023 ಮತ್ತು 468/2023 ಪ್ರಕರಣಗಳು ದಾಖಲಾಗಿರುತ್ತವೆ. ಈ ಪ್ರಕರಣಗಳಿಗೆ ಸಂಬಂಧಿಸಿದಂತೆ, ದಿನಾಂಕ:25.04.2023ರಂದು ನಡೆದ ವಿಚಾರಣೆಯಲ್ಲಿ ಪ್ರಕರಣದ ಬಗ್ಗೆ ರಾಜ್ಯ ಸರ್ಕಾರವನ್ನು ಪ್ರತಿನಿಧಿಸುತ್ತಿರುವ Solicitor General ರವರು ಪರಿಷ್ಕೃತ ಪುನರ್ ವರ್ಗೀಕರಣದ ಆದೇಶ ಸಂಖ್ಯೆ: ಹಿಂವಕ 135 ಬಿಸಿಎ 2023, ದಿನಾಂಕ:27.03.2023ರ ಆದೇಶವನ್ನು ಶಿಕ್ಷಣ ಮತ್ತು ಉದ್ಯೋಗಕ್ಕಾಗಿ ಅಳವಡಿಸಿಕೊಳ್ಳಲಾಗುವುದಿಲ್ಲವೆಂದು ಹಾಗೂ ಪ್ರಸ್ತುತ ಚಾಲ್ತಿಯಲ್ಲಿರುವ ಸರ್ಕಾರದ ಆದೇಶ ಸಂಖ್ಯೆ: ಸಕಇ 225 ಬಿಸಿಎ 2000, ದಿನಾಂಕ:30.03.2002ನ್ನು ಮುಂದುವರೆಸಲಾಗುವುದು ಎಂಬ ಹೇಳಿಕೆಯನ್ನು (Statement of Record) ದಾಖಲಿಸಿರುತ್ತಾರೆ.

ದಿನಾಂಕ:27.03.2023 ರ ಸರ್ಕಾರದ ಆದೇಶವನ್ನು ಪ್ರಶ್ನಿಸಿ ರಾಜ್ಯ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂಖ್ಯೆ: 7586/2023 ಹಾಗೂ 8976/2023 ಪ್ರಕರಣಗಳು ದಾಖಲಾಗಿರುತ್ತವೆ. ರಿಟ್ ಅರ್ಜಿ ಸಂಖ್ಯೆ: 26045/2022 (GM-RES) PIL ಶ್ರೀ ಡಿ.ಜಿ. ರಾಘವೇಂದ್ರ ವಿರುದ್ಧ ರಾಜ್ಯ ಸರ್ಕಾರ ಪ್ರಕರಣದಲ್ಲಿ ಸರ್ಕಾರವು ದಿನಾಂಕ:23.03.2023 ರಂದು ಸರ್ಕಾರದ ಆದೇಶ ಸಂಖ್ಯೆ: ಸಕಇ 225 ಬಿಸಿಎ 2000, ದಿನಾಂಕ:30.03.2002ರ ಆದೇಶದ ಪ್ರವರ್ಗ-II (ಎ) ಗೆ ಮೀಸಲಾತಿ ಪ್ರಮಾಣದ ಬದಲಾವಣೆ ಮತ್ತು ಯಾವುದೇ ಸಮುದಾಯಗಳನ್ನು ಪ್ರವರ್ಗ-II (ಎ)ಗೆ ಸೇರಿಸುವುದು ಅಥವಾ ಕೈಬಿಡುವುದನ್ನು ಮಾನ್ಯ ಉಚ್ಚ ನ್ಯಾಯಾಲಯದ ಮುಂದಿನ ಅನುಮತಿ ಇಲ್ಲದೆ ಜಾರಿಗೊಳಿಸುವುದಿಲ್ಲವೆಂದು Compliance/Undertaking Affidavit ನ್ನು ಮಾನ್ಯ ನ್ಯಾಯಾಲಯಕ್ಕೆ ಸಲ್ಲಿಸಲಾಗಿದೆ.

ಪ್ರಕರಣಗಳು ಮಾನ್ಯ ಘನ ಸರ್ವೋಚ್ಚ ನ್ಯಾಯಾಲಯದಲ್ಲಿ ಹಾಗೂ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಇತ್ಯರ್ಥಕ್ಕೆ ಬಾಕಿ ಇರುತ್ತವೆ. ನ್ಯಾಯಾಲಯಗಳಲ್ಲಿ ಪ್ರಕರಣಗಳು ಇತ್ಯರ್ಥವಾದ ನಂತರ ಪರಿಶೀಲಿಸಿ ಕ್ರಮವಹಿಸಲಾಗುತ್ತದೆ.

**ಸಂಖ್ಯೆ:ಹಿಂವಕ 116 ಬಿಸಿಎ 2026**

**(ಶಿವರಾಜ್ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು.